ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಅತಿಥಿ ಉಪನ್ಯಾಸಕರುಗಳಿಗೆ ಸೇವಾ ಭದ್ರತೆ ಒದಗಿಸಿ ಸೇವಾ ವಿಲೀನಗೊಳಿಸುವ ಬಗ್ಗೆ

ಶ್ರೀ ಕೆ. ಟಿ. ಶ್ರೀಕಂಠೇಗೌಡ(ಪದವೀಧರ ಕ್ಷೇತ್ರ) -

107 (42) ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರು ಎಷ್ಟು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ;

(ಆ) ಇವರಿಗೆ ನೀಡುತ್ತಿರುವ ವೇತನ ಎಷ್ಟು; ಎಷ್ಟು ತಿಂಗಳ ವೇತನ ಬಾಕಿ ಇದೆ;

(ಇ) ಹೊಸದಾಗಿ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಅಧಿಸೂಚನೆ ಹೊರಡಿಸಲಾಗಿದೆಯೇ;

(ಈ) ಇದರಿಂದ ಅತಿಥಿ ಉಪನ್ಯಾಸಕರು ಕೆಲಸವನ್ನು ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ;

(ಉ) ನೆರೆ ರಾಜ್ಯ ಪಶ್ಚಿಮ ಬಂಗಾಳ ಹಾಗೂ ಇತರೆ ರಾಜ್ಯಗಳ ಮಾದರಿಯಲ್ಲಿ ಅತಿಥಿ ಉಪನ್ಯಾಸಕರಿಗೆ ಉದ್ಯೋಗ ಭದ್ರತೆ ನೀಡಿ ಸೇವಾ ವಿಲೀನಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?